# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 553 |
| ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 11.03.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಗಾಗಿ ಗುರುತು ಮಾಡಲಾಗಿರುವ ಮರಳು ಬ್ಲಾಕ್ ಗಳೆಷ್ಟು; | • ಕೊಡಗು ಜಿಲ್ಲೆಯಲ್ಲಿ ಮಳೆಗಾಲದ ಅವಧಿಯು ಅಧಿಕವಾಗಿದ್ದು, ಎಲ್ಲಾ ನದಿಗಳು ವರ್ಷ ಪೂರ್ತಿ ತುಂಬಿ ಹರಿಯುತ್ತಿರುತ್ತವೆ. ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರಲ್ಲಿ in-stream ನಲ್ಲಿ ಮರಳು ಗಣಿಗಾರಿಕೆ ನಿಷೇಧಿಸಿರುವುದರಿಂದ ಯಾವುದೇ ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ.<br>• ಮುಂದುವರೆದು, ಹೇಮಾವತಿ ಮತ್ತು ಹಾರಂಗಿ ನದಿಗಳಿಗೆ ನಿರ್ಮಿಸಲಾಗಿರುವ ಅಣೆಕಟ್ಟುಗಳಿಂದ ನೀರನ್ನು ಹೊರಬಿಡದ ಕಾರಣ ಸದರಿ ನದಿಗಳು ಹಿನ್ನೀರಿನಿಂದ ತುಂಬಿರುತ್ತವೆ. ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರಲ್ಲಿ in-stream ನಲ್ಲಿ ಮರಳು ಗಣಿಗಾರಿಕೆ ನಿಷೇಧಿಸಿರುವುದರಿಂದ ಸದರಿ ನದಿ ಪಾತ್ರಗಳಲ್ಲಿ ಯಾವುದೇ ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ. |
| ಆ) | ಈ ರೀತಿ ಗುರುತಿಸಿದ ಎಷ್ಟು ಮರಳು ಬ್ಲಾಕ್ ಗಳನ್ನು ಮರಳು ಗಣಿಗಾರಿಕೆಗಾಗಿ ಸಾರ್ವಜನಿಕ ಹರಾಜು ಮೂಲಕ ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು) | ಪ್ರಸ್ತುತ, ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ಯಾವುದೇ ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ. |
| ಇ) | ಕೊಡಗು ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಮತ್ತು ದಾಖಲಾದ ಪ್ರಕರಣಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು) | • ಅನಧಿಕೃತ ಮರಳು ಗಣಿಗಾರಿಕೆ ತಡೆಗಟ್ಟಲು ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆ ಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಹಾಗೂ 22 ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು- |

-1994 ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

- ಅದರಂತೆ, ಕೊಡಗು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಗಳಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಕ್ರಮವಹಿಸಲಾಗಿದ್ದು, ಕಳೆದ 03 ವರ್ಷಗಳಲ್ಲಿ ಕೈಗೊಂಡ ಕ್ರಮಗಳ ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿರುತ್ತವೆ.

| ಕ್ರ. ಸಂ | ತಾಲ್ಲೂಕು | ವರ್ಷ | ಪ್ರಕರಣ ಗಳ ಸಂಖ್ಯೆ | ದಂಡ (₹ಲಕ್ಷ ಗಳಲ್ಲಿ) | ಎಫ್ ಐಆರ್/ ಪಿಸಿ ಆರ್ |
|---|---|---|---|---|---|
| 1. | ಸೋಮವಾರ ಪೇಟೆ | 2022-23 | 12 | 3.24 | - |
| | | 2023-24 | 03 | 0.94 | - |
| | | 2024-25 | 02 | 0.45 | - |
| 2 | ಮಡಿಕೇರಿ | 2022-23 | 41 | 11.81 | 02 |
| | | 2023-24 | 23 | 4.29 | 03 |
| | | 2024-25 | 10 | 1.48 | - |
| 3 | ವಿರಾಜಪೇಟೆ | 2022-23 | 05 | 0.18 | 02 |
| | | 2023-24 | 02 | 0.56 | - |
| | | 2024-25 | 02 | 0.22 | - |
| 4 | ಕುಶಾಲನಗರ | 2022-23 | 01 | 0.44 | - |
| | | 2023-24 | - | - | - |
| | | 2024-25 | - | - | - |
| 5 | ಪೊನ್ನಂಪೇಟೆ | 2022-23 | 13 | 3.02 | - |
| | | 2023-24 | 09 | 1.61 | 01 |
| | | 2024-25 | 10 | 1.97 | 01 |
| ಒಟ್ಟು | | | 133 | 30.21 | 09 |

ಸಂಖ್ಯೆ ಸಿಐ-ಎಂಎಂಎನ್/69/2025

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.